**DW2**

# ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಬೆಳ್ತಂಗಡಿ

**O.S.No. 54/2013**

| | |
|---|---|
| ಹೆಸರು | : ಸೇಸಪ್ಪ ಗೌಡ |
| ತಂದೆಯ ಹೆಸರು | : ರುಕ್ಮಯ್ಯ ಗೌಡ |
| ಪ್ರಾಯ | : 75 ವರ್ಷ |
| ಉದ್ಯೋಗ | : ಕೃಷಿ |
| ವಾಸ | : ಕೊಕ್ಕಡ ಗ್ರಾಮ, ಬೆಳ್ತಂಗಡಿ ತಾಲೂಕು |

ದಿನಾಂಕ 19.11.2021 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾದ ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀಮತಿ ಪಿ.ಆರ್.ಕೆ ವಕೀಲರಿಂದಃ

ಈ ಪ್ರಕರಣದಲ್ಲಿ ನಾನು ಸಾಕ್ಷಿದಾರನಾಗಿದ್ದು, ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಕೊರಗ ಮಲೆಕುಡಿಯವರು ಕಿಟ್ಟ ಮಲೆಕುಡಿಯ ಎಂಬುವವರಿಗೆ ಒಂದು ವಿಲ್ ನಾಮೆ ಬರೆದಿದ್ದು ಅದಕ್ಕೆ ನಾನು ಮತ್ತು ತಿಮ್ಮಪ್ಪ ಗೌಡ ಎಂಬುವವರು ಸಾಕ್ಷಿದಾರರಾಗಿ ಸಹಿ ಮಾಡಿರುತ್ತೇವೆ. ಸದರಿ ವಿಲ್ ನಾಮೆಯನ್ನು ಈಗ ನೋಡುತ್ತಿದ್ದೇನೆ. ಸದರಿ ವಿಲ್ ನಾಮೆ ಈಗಾಗಲೇ ನಿಡಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯು ನಿಡಿ-1 ರಲ್ಲಿರುವ ಕೊರಗ ಮಲೆಕುಡಿಯ ಮತ್ತು ತನ್ನ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಆದ್ದರಿಂದ ಕೊರಗ ಮಲೆ ಕುಡಿಯರವರ ಸಹಿಗಳನ್ನು ಕ್ರಮವಾಗಿ ನಿಡಿ-1(ಎ) ಯಿಂದ ನಿಡಿ-1(ಡಿ) ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಇ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ವಾದಿ ಪರ ಮತ್ತು 3 ರಿಂದ 9 ನೇ ಪ್ರತಿವಾದಿಗಳ ಪರವಾಗಿಃ ಪ್ರತಿವಾದ ಕ್ಲೇಮಿಗೆ ಯಾವುದೇ ಲಿಖಿತ ಹೇಳಿಕೆ ಸಲ್ಲಿಸಿರುವುದಿಲ್ಲ. ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

(ಸಾ.ಓ.ಹೇ.ಕೇ.ಸ.ಇ.ಎ.ಒ)

ಪ್ರಭಾರ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಬೆಳ್ತಂಗಡಿ